ದಿನಾಂಕಃ 28.04.2025

ಅಸಲುದಾವಃ 95/2024

ಪಿ.ಡಬ್ಲ್ಯೂ: 4

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಅಂಶಗಳನ್ನು ನಾನೇ ನಮ್ಮ ವಕೀಲರಿಗೆ ಹೇಳಿ ವಿವರಿಸಿದ್ದು, ಅದರಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ನಿಪಿ1 ಎ ರಲ್ಲಿ ಷರಾವನ್ನು ನಾನು ಬರೆದಿರುತ್ತೇನೆ ಮತ್ತು ಬಿಕ್ಲಂ ಆಗಿ ಸಹಿ ಮಾಡಿರುತ್ತೇನೆ. ಸಾಕ್ಷಿ ನಿಪಿ1 ಸಿ ನನ್ನ ಸಹಿ ಎಂದು ನೋಡಿ ಗುರುತಿಸಿರುತ್ತಾರೆ. 1 ನೇ ಪ್ರತಿವಾದಿ ಎಂ.ಸ್ವಾಮಿ ಅವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಸದರಿ ಸಹಿಯನ್ನು ನಿಪಿ1 ಬಿ ಎಂದು ಗುರುತಿಲಾಗಿರುತ್ತದೆ. ಸಾಕ್ಷಿದಾರರಾದ ಚೇತನ್ ಎಂ.ಆರ್. ರವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ಈಗಾಗಲೆ ನಿಪಿ1 ಇ ಎಂದು ಗುರುತಿಸಲಾಗಿರುತ್ತದೆ.

**ಪಾಟೀ ಸವಾಲುಃ ಪ್ರತಿವಾದಿಯರು ಲಿಖಿತ ಹೇಳಿಕೆ ಸಲ್ಲಿಸದೆ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು

ಮದ್ದೂರು.